(ಗೊಂದಲ)

1957ರ ಕರ್ನಾಟಕ ಮುದ್ರಾಂಕ ಅಧಿನಿಯಮದ 9(2)ನೇ ಪ್ರಕರಣದ ಮೇರೆಗೆ :

(2) ಶ್ರೀ ಮಲ್ಲಿಕಾರ್ಜುನ ಕೃಷಿ ಅಭಿವೃದ್ಧಿ ಸಂಸ್ಥೆ ನಿಯಮಿತ, ಬರಡೋರಿ, ಇಂಡಿ ತಾಲ್ಲೂಕು, ಬಿಜಾಪುರ ಜಿಲ್ಲೆ, ಇದರ ಅಧ್ಯಕ್ಷರು ಹಾಗೂ ಸದಸ್ಯರು 256 ಎಕರೆ 13 ಗುಂಟೆ ಜಮೀನನ್ನು ನೀರಾವರಿಗೆ ಒಳಪಡಿಸಲು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್, ಇಂಡಿ, ಇವರಿಂದ ಏತ ನೀರಾವರಿ ಸಾಲ ಪಡೆಯಲು ಸದರಿ ಬ್ಯಾಂಕಿಗೆ ಬರೆದುಕೊಡುವ ಆಧಾರ ಪತ್ರಗಳಿಗೆ ತಗುಲುವ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಫೀಗೆ ವಿನಾಯಿತಿ ನೀಡಿರುವ ಸಂಬಂಧಲ್ಲಿ ದಿನಾಂಕ 3-8-96ರಂದು ಹೊರಡಿಸಲಾದ ಕಂಇ 228 ಮುನೋಮು 96ನೇ ಕ್ರಮಾಂಕದ ಅಧಿಸೂಚನೆ ಹಾಗೂ ಆದೇಶಗಳನ್ನು ಮಂಡಿಸುತ್ತೇನೆ.

VIII ಶ್ರೀ ಕೆ.ಎನ್.ನಾಗೇಗೌಡ (ಬೃಹತ್ ನೀರಾವರಿ ಸಚಿವರು) : ಮಾನ್ಯ ಅಧ್ಯಕ್ಷರೆ, ಮಾನ್ಯ ನಗರಾಭಿವೃದ್ಧಿ ಮಂತ್ರಿಗಳ ಪರವಾಗಿ :

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮದ48(5)ನೇ ಪ್ರಕರಣದ ಮೇರೆಗೆ;

(1) 1995-96ನೇ ಸಾಲಿನ ಹೊಸಪೇಟೆ ನಗರಾಭಿವೃದ್ಧಿ ಮಂಡಳಿಯ ಲೆಕ್ಕ ಪರಿಶೋಧನಾ ವರದಿ;

(2) 1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮದ 49ನೇ ಪ್ರಕರಣದ ಮೇರೆಗೆ;

(3) 1996-97ನೇ ಸಾಲಿನ ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ವಾರ್ಷಿಕ ವರದಿಗಳನ್ನು ಮಂಡಿಸುತ್ತೇನೆ.

IX ಶ್ರೀ ಕೆ.ಎನ್. ನಾಗೇಗೌಡ (ಬೃಹತ್ ನೀರಾವರಿ ಸಚಿವರು) : ಮಾನ್ಯ ಅಧ್ಯಕ್ಷರೆ, ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ಮಂತ್ರಿ ಪರವಾಗಿ :

1956ರ ಕಂಪನಿಗಳ ಕಾಯ್ದೆಯ 619ಎ ಪ್ರಕರಣದ ಮೇರೆಗೆ;

1995-96ನೇ ಸಾಲಿನ ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತದ 32ನೇ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ವರದಿಗಳನ್ನೊಪ್ಪಿಸುವುದು

ಡಾ: ಎಂ.ಪಿ. ಕರ್ಕಿ (ಕುಮಟಾ) : ಮಾನ್ಯ ಅಧ್ಯಕ್ಷರೆ, ತಮ್ಮ ಅಪ್ಪಣೆ ಪಡೆದು ಲೆಕ್ಕಪತ್ರಗಳ ಸಮಿತಿಯ ಅಧ್ಯಕ್ಷನಾದ ನಾನು ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಗೆ ಸಂಬಂಧಿಸಿದ 27ನೇ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಶ್ರೀ ಚಂದ್ರಶೇಖರ್‌ರಡ್ಡಿ ದೇಶಮುಖ್‌ಮದನ್ (ಸೇಡಂ) :

(ಮಾನ್ಯ ಸದಸ್ಯರು ಗೈರು ಹಾಜರಿ)

ಅಧ್ಯಕ್ಷರು : ವರದಿಗಳನ್ನೊಪ್ಪಿಸಲಾಯಿತು.

ಚುನಾವಣಾ ಪ್ರಸ್ತಾವಗಳು

ಶ್ರೀ ಕೆ.ಎನ್. ನಾಗೇಗೌಡ (ಬೃಹತ್ ನೀರಾವರಿ ಸಚಿವರು)

ಶ್ರೀ ಎಂ.ಸಿ. ನಾಣಯ್ಯ (ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ವಾರ್ತಾ ಮತ್ತು ಪ್ರಚಾರ ಇಲಾಖಾ ಮಂತ್ರಿಗಳ ಪರವಾಗಿ)

ಅ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 265(1)ರ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹನ್ನೆರಡು ಜನ ಸದಸ್ಯರನ್ನು ಚುನಾಯಿಸಬೇಕು;

ಆ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 268(1)ರ ಅನುಸಾರವಾಗಿ ಈ ಸಭೆ ಅಂದಾಜುಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕು;

ಇ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 271(1)ರ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸಬೇಕು;

ಈ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 272(1)ರ ಅನುಸಾರವಾಗಿ ಈ ಸಭೆ ಹಕ್ಕುಬಾಧ್ಯತಾ ಸಮಿತಿಗೆ ಏಳು ಜನ ಸದಸ್ಯರನ್ನು ಚುನಾಯಿಸಬೇಕು;

ಉ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 277(1)ರ ಅನುಸಾರವಾಗಿ ಈ ಸಭೆ ಅಧೀನ ಶಾಸನ ರಚನಾ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸಬೇಕು;

ಊ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 282(1)ರ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸಬೇಕು.

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಹಾಗೂ ನಡವಳಿಕೆ ನಿಯಮ 283(1)ರ ಅನುಸಾರವಾಗಿ ಈ ಸಭೆ ಖಾಸಗಿ ಸದಸ್ಯರ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು ಚುನಾಯಿಸಬೇಕು: